ನಿಮ್ಮಲ್ಲೊಬ್ಬರಿಗೆ ಅಶುದ್ಧಿಯುಂಟಾದರೆ ಅವರು ವುದೂ ನಿರ್ವಹಿಸುವ ತನಕ ಅಲ್ಲಾಹು ಅವರ ನಮಾಝನ್ನು ಸ್ವೀಕರಿಸುವುದಿಲ್ಲ

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ನಿಮ್ಮಲ್ಲೊಬ್ಬರಿಗೆ ಅಶುದ್ಧಿಯುಂಟಾದರೆ
ಅವರು ವುದೂ ನಿರ್ವಹಿಸುವ ತನಕ ಅಲ್ಲಾಹು ಅವರ ನಮಾಝನ್ನು ಸ್ವೀಕರಿಸುವುದಿಲ್ಲ."
[صحيح] [متفق عليه]

ಶುದ್ಧಿಯು ನಮಾಝ್ ಸಿಂಧುವಾಗಲಿರುವ ಷರತ್ತುಗಳಲ್ಲಿ ಒಂದಾಗಿದೆಯೆಂದು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ವಿವರಿಸಿದ್ದಾರೆ. ಆದ್ದರಿಂದ, ನಮಾಝ್ ನಿರ್ವಹಿಸಲು ಬಯಸುವವರು, ಅವರಿಗೆ ಮಲಮೂತ್ರ ವಿಸರ್ಜನೆ, ನಿದ್ದೆ ಮುಂತಾದ ವುದೂ ಅಸಿಂಧುವಾಗುವ ಕಾರ್ಯಗಳಲ್ಲಿ ಏನಾದರೊಂದು ಸಂಭವಿಸಿದ್ದರೆ ನಮಾಝ್ಗೆ ಮೊದಲು ವುದೂ ನಿರ್ವಹಿಸುವುದು ಕಡ್ಡಾಯವಾಗಿದೆ.

https://sunnah.global/hadeeth/kn/show/3534